# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** 1) ಶ್ರೀ ವಿ.ಚ.ಚಟ್ಟೇರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 2) ಎಸ್.ಹೆಚ್.ಮಾಗಣಗೇರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 3) ಶ್ರೀ ಎಂ.ಎಸ್.ಭಂಕಲಗಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಜಿ.ಕೆ. ಮಾನ್‌ಕರ್, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು 5) ಶ್ರೀ ಎ.ಎಂ.ಬಿರಾದಾರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ – ಗುಬ್ಬೇವಾಡ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು –ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM-491/2006/DRE-3, ದಿನಾಂಕ:27.04.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು–1 ರವರು ದಿನಾಂಕ: 22.04.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಗಂಗೂಲಿ ಹೆಚ್.ಕುರುಬತನಳ್ಳಿ, ಗ್ರಾಮ ಪಂಚಾಯತಿ ಸದಸ್ಯರು, ಬೋರಗಿ, ಸಿಂಧಗಿ ತಾಲ್ಲೂಕು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಗುಬ್ಬೇವಾಡ ಗ್ರಾಮ ಪಂಚಾಯತಿಗೆ 2004–05 ನೇ ಸಾಲಿಗೆ ವಿವಿಧ ಅಭಿವೃದ್ಧಿ ಯೋಜನೆಗಳಡಿ ಬಿಡುಗಡೆ ಆದ ಅನುದಾನವನ್ನು ಕಾಮಗಾರಿಗಳನ್ನು ಅನುಷ್ಠಾನ/ಮುಕ್ತಾಯಗೊಳಿಸದೆ ದುರುಪಯೋಗಪಡಿಸಿಕೊಂಡಿರುವ ಆರೋಪದ ಮೇಲೆ ತನಿಖೆ ಕೈಗೊಳ್ಳಲಾಗಿರುತ್ತದೆ.

ಈ ಪ್ರಕರಣವನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಯಪುರ ಜಿಲ್ಲಾ ಪಂಚಾಯತಿ ಇವರು ತನಿಖೆ ನಡೆಸಿ, 1) ಶ್ರೀ ವಿ.ಚ.ಚಟ್ಟೇರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 2) ಎಸ್.ಹೆಚ್.ಮಾಗಣಗೇರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 3) ಶ್ರೀ ಎಂ.ಎಸ್.ಭಂಕಲಗಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಜಿ.ಕೆ. ಮಾನ್‌ಕರ್, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು 5) ಶ್ರೀ ಎ.ಎಂ.ಬಿರಾದಾರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ – ಗುಬ್ಬೇವಾಡ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳು 2004 ರಿಂದ 2006 ರವರೆಗಿನ ಅವಧಿಯಲ್ಲಿ ಗುಬ್ಬೇವಾಡ ಗ್ರಾಮ ಪಂಚಾಯತಿಯಲ್ಲಿ ವಿವಿಧ ಯೋಜನೆಗಳಡಿ ಕಾಮಗಾರಿಗಳನ್ನು ನಿರ್ವಹಿಸಿದೆ/ಮುಕ್ತಾಯಗೊಳಿಸದೆ ಅನುದಾನವನ್ನು ದುರುಪಯೋಗಪಡಿಸಿಕೊಂಡು, ಕರ್ತವ್ಯಲೋಪ, ದುರ್ನಡತೆ ಹಾಗೂ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವ ಆರೋಪಗಳಡಿ ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಾವಳಿಗಳು, 1957 ರ ನಿಯಮ 14ಎ ರಡಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಮೇಲ್ಕಂಡ ನೌಕರರು ನಿವೃತ್ತರಾಗಿದ್ದು, ಸದರಿ ಕಾಮಗಾರಿಗಳು 2004 ರಿಂದ 2006 ರವರೆಗಿನ ಅವಧಿಗೆ ಸಂಬಂಧಿಸಿದ್ದಾಗಿದ್ದು, ಸಾರ್ವಜನಿಕ ಹಣ ದುರುಪಯೋಗಪಡಿಸಿಕೊಂಡಿರುವುದರಿಂದ ಈ ಪರಿಣಾಮವು ಮುಂದುವರೆಯುವುದರಿಂದ, ಪ್ರಕರಣ ನಡೆದು ನಾಲ್ಕು ವರ್ಷಗಳು ಕಳೆದಿದ್ದರೂ ಸದರಿ ನಿವೃತ್ತ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ) ರಡಿ ಕ್ರಮ ಜರುಗಿಸಲು ಮಾನ್ಯ ಉಪಲೋಕಾಯುಕ್ತ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ 1) ಶ್ರೀ ವಿ.ಚ.ಚಟ್ಟೇರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 2) ಎಸ್.ಹೆಚ್.ಮಾಗಣಗೇರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 3) ಶ್ರೀ ಎಂ.ಎಸ್.ಭಂಕಲಗಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಜಿ.ಕೆ. ಮಾನ್‌ಕರ್, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು 5) ಶ್ರೀ ಎ.ಎಂ.ಬಿರಾದಾರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ – ಗುಬ್ಬೇವಾಡ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 400 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 17.05.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, 1) ಶ್ರೀ ವಿ.ಚ.ಚಟ್ಟೇರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 2) ಎಸ್.ಹೆಚ್.ಮಾಗಣಗೇರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 3) ಶ್ರೀ ಎಂ.ಎಸ್.ಭಂಕಲಗಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಜಿ.ಕೆ. ಮಾನ್‌ಕರ್, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು 5) ಶ್ರೀ ಎ.ಎಂ.ಬಿರಾದಾರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ – ಗುಬ್ಬೇವಾಡ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ) ರಡಿ ಇಲಾಖಾ ವಿಚಾರಣೆ ಸರ್ಕಾರವು ಅನುಮತಿ ನೀಡಿರುವುದರಿಂದ, ಸದರಿ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ) ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
**(ಮೇಲೆ ಓದಲಾದ ಪತ್ರದೊಂದಿಗೆ ಸಲ್ಲಿಸಲಾಗಿದ್ದ ಮೂಲ ಲಗತ್ತುಗಳನ್ನು ಪುಟ ಸಂಖ್ಯೆ 1 ರಿಂದ 153 ರವರೆಗೆ ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ.)**
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ಸಿಂಧಗಿ ತಾಲ್ಲೂಕು ಪಂಚಾಯತಿ, ಸಿಂಧಗಿ, ವಿಜಯಪುರ ಜಿಲ್ಲೆ.
(ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ವಿ.ಚ.ಚಟ್ಟೇರ, ನಿವೃತ್ತ ಗ್ರಾ.ಪಂ. ಕಾರ್ಯದರ್ಶಿ, ಗುಬ್ಬೇವಾಡ ಗ್ರಾ.ಪಂ., ಸಿಂಧಗಿ ತಾ, ವಿಜಯಪುರ ಜಿಲ್ಲೆ.
7) ಶ್ರೀ ಎಸ್.ಹೆಚ್.ಮಾಗಣಗೇರಿ, ನಿವೃತ್ತ ಗ್ರಾ.ಪಂ. ಕಾರ್ಯದರ್ಶಿ, ಗುಬ್ಬೇವಾಡ ಗ್ರಾ.ಪಂ., ಸಿಂಧಗಿ ತಾ, ವಿಜಯಪುರ ಜಿಲ್ಲೆ.
8) ಶ್ರೀ ಎಂ.ಎಸ್.ಭಂಕಲಗಿ, ನಿವೃತ್ತ ಗ್ರಾ.ಪಂ. ಕಾರ್ಯದರ್ಶಿ, ಗುಬ್ಬೇವಾಡ ಗ್ರಾ.ಪಂ., ಸಿಂಧಗಿ ತಾ, ವಿಜಯಪುರ ಜಿಲ್ಲೆ.
9) ಶ್ರೀ ಜಿ.ಕೆ. ಮಾನ್‌ಕರ್, ನಿವೃತ್ತ ಗ್ರಾ.ಪಂ. ಕಾರ್ಯದರ್ಶಿ, ಗುಬ್ಬೇವಾಡ ಗ್ರಾ.ಪಂ., ಸಿಂಧಗಿ ತಾ, ವಿಜಯಪುರ ಜಿಲ್ಲೆ.
10) ಶ್ರೀ ಎ.ಎಂ.ಬಿರಾದಾರ, ನಿವೃತ್ತ ಗ್ರಾ.ಪಂ. ಕಾರ್ಯದರ್ಶಿ, ಗುಬ್ಬೇವಾಡ ಗ್ರಾ.ಪಂ., ಸಿಂಧಗಿ ತಾ, ವಿಜಯಪುರ ಜಿಲ್ಲೆ.
11) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.